**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**ಅಸಲು ದಾವೆ ಸಂಖ್ಯೆ 633/2024**

**ಪಿ.ಡಬ್ಲ್ಯುಃ 2**

**ದಿನಾಂಕಃ 11.06.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿಪರ: ಶ್ರೀ. ಎನ್.ಎಸ್. ವಕೀಲರಿಂದಃ–**

ನಾನು ಈ ಪ್ರಕರಣದಲ್ಲಿ 2 ನೇ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಅದನ್ನು ಓದಿ ತಿಳಿದು, ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಸಾಕ್ಷಿಯು ಕೆಳಕಂಡ ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ.

ಎರಡು ವಂಶವೃಕ್ಷದ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ.1 ಮತ್ತು 2 ಎಂದು ಗುರುತಿಸಲಾಯಿತು.

ದಿನಾಂಕ 12.01.1981 ರ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು ಗುರುತಿಸಲಾಯಿತು.

ಒಂದು ಗಣಕೀಕೃತ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.4 ಎಂದು ಗುರುತಿಸಲಾಯಿತು.

ಮೂರು ಕೈಬರಹದ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.5 ರಿಂದ 7 ಎಂದು ಗುರುತಿಸಲಾಯಿತು.

ಇಂಡೆಕ್ಸ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.8 ಎಂದು ಗುರುತಿಸಲಾಯಿತು.

ಆರ್.ಆರ್.ವಹಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.9 ಎಂದು ಗುರುತಿಸಲಾಯಿತು.

ಮೂರು ಕೈಬರಹದ ಎಂ.ಆರ್.ನ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.10 ರಿಂದ 12 ಎಂದು ಗುರುತಿಸಲಾಯಿತು.

ಒಂದು ಗಣಕೀಕೃತ ಎಂ.ಆರ್.ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.13 ಎಂದು ಗುರುತಿಸಲಾಯಿತು.

ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.14 ಎಂದು ಗುರುತಿಸಲಾಯಿತು.

ಎಂ.ಆರ್.ನ್ನು ಹಾಜರುಪಡಿಸಿದ್ದು ಅದನ್ನು ನಿಪಿ.15 ಎಂದು ಗುರುತಿಸಲಾಯಿತು.

ಹದ್ದುಬಸ್ತು ಸರ್ವೆ ನಕಾಶೆ ಹಾಗೂ ಮಹಜರಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ.16 ಎಂದು ಗುರುತಿಸಲಾಯಿತು.

**(ಪ್ರತಿವಾದಿ ಪರ ಲಿಖಿತ ಹೇಳಿಕೆಯನ್ನು ಸಲ್ಲಿಸದೆ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು)**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದ್ದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ

sd/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದಃನ್ಯಾದಂ.,ರವರು ಕಡೂರು.